ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ

"ವಿ ಟಿ ಯು ಅಧಿನಿಯಮ ೧೯೯೪" ರ ಅಡಿಯಲ್ಲಿ ಕರ್ನಾಟಕ ಸರ್ಕಾರದಿಂದ
ಸ್ಥಾಪಿತವಾದ ರಾಜ್ಯ ವಿಶ್ವವಿದ್ಯಾಲಯ

**Visvesvaraya Technological University**

(State University of Government of Karnataka Established as per the VTU Act, 1994)
"Jnana Sangama" Belagavi-590018, Karnataka, India

**Dr. B.E. Rangaswamy. Ph.D**
**REGISTRAR**

Phone: (0831) 2498100
Fax : (0831) 2405467

**Ref: VTU/BGM/SA/Aca-Cirs/2024-25/** 2159 **Date :** 10 AUG 2024

## ಸುತ್ತೋಲೆ

**ವಿಷಯ : ರಾಜ್ಯದ ವಿಶ್ವವಿದ್ಯಾಲಯಗಳಲ್ಲಿ/ ಶಿಕ್ಷಣ ಸಂಸ್ಥೆಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಗೆ ಪ್ರವೇಶ ಸಮಯದಲ್ಲಿ ಶುಲ್ಕಗಳನ್ನು ಪಡೆಯದಿರುವ ಬಗ್ಗೆ**

ಉಲ್ಲೇಖ: ಸಮಾಜ ಕಲ್ಯಾಣ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರು ಇವರ ಪತ್ರ ದಿ: ೫-೮-೨೦೨೪

ಮೇಲ್ಕಾಣಿಸಿದ ವಿಷಯಕ್ಕೆ ಸಂಬಂಧಿಸಿದಂತೆ, ಸಮಾಜ ಕಲ್ಯಾಣ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರು ಇವರ ಪತ್ರ ದಿ: ೫-೮-೨೦೨೪ ಈ ಸುತ್ತೋಲೆಯೊಂದಿಗೆ ಲಗತ್ತಿಸಲಾಗಿದೆ.

ಪತ್ರದಲ್ಲಿ ಹೇಳಿರುವ ನಿಯಮಗಳನ್ನು ಚಾಚೂ ತಪ್ಪದೇ ಪಾಲಿಸಲು ಹಾಗೂ ಸಂಬಂದಿಸಿದ ಎಲ್ಲರ ಗಮನಕ್ಕೆ ತರಲು ಈ ಮೂಲಕ ಕೋರಲಾಗಿದೆ.

**ಅಡಕ: ಮೇಲಿನಂತೆ**

ಆದೇಶದ ಮೇರೆಗೆ
09/08/24
**ಕುಲಸಚಿವರು**
**ವಿ.ತಾ.ವಿ. ಬೆಳಗಾವಿ**

**ಇವರಿಗೆ,**

೧. ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಎಲ್ಲ ಆಧೀನ ಮಹಾವಿದ್ಯಾಲಯಗಳ (ಸಂಯೋಜಿತ, ಸ್ವಾಯತ್ತ ಹಾಗೂ ಘಟಕ) ಪ್ರಾಂಶುಪಾಲರಿಗೆ
೨. ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಎಲ್ಲ ವಿಭಾಗಗಳ ಮುಖ್ಯಸ್ಥರಿಗೆ,

**ಪ್ರತಿ ಮಾಹಿತಿಗಾಗೀ:**

೧) ಸಹಾಯಕ ನಿರ್ದೇಶಕರು(ಗ್ರೆಡ್-೧), ಸಮಾಜ ಕಲ್ಯಾಣ ಇಲಾಖೆ, ಸಹಾಯಕ ನಿರ್ದೇಶಕರು(ಗ್ರೆಡ್-೧)ರವರ ಕಚೇರಿ, ಕರ್ನಾಟಕ ಸರ್ಕಾರ, ಬೆಂಗಳೂರು ದಕ್ಷಿಣ ತಾಲೂಕು, ಎಸ್. ಕರಿಯಪ್ಪ ಮುಖ್ಯರಸ್ತೆ, ಬನಶಂಕರಿ, ಬೆಂಗಳೂರು- ೫೬೦ ೦೭೦
೨) ನಿರ್ದೇಶಕರು(ಪ್ರ), ವಿತಾವಿ ಐಟಿಐಎಸ್ಎಮ್‌ಯು, ವಿತಾವಿ ಬೆಳಗಾವಿ, ಜಾಲತಾಣದಲ್ಲಿ ಪ್ರಕಟಿಸಲು,
೩) ಎಲ್ಲ ವಿಶೇಷಾಧಿಕಾರಿಗಳು ಹಾಗೂ ಕಾರ್ಯಾನಿರ್ವಾಹಕರು, ವಿದ್ಯಾಮಂಡಳ ವಿಭಾಗ, ವಿತಾವಿ ಬೆಳಗಾವಿ,
೪) ಕುಲಪತಿಗಳ ಕಾರ್ಯದರ್ಶಿಗಳು, ವಿತಾವಿ ಬೆಳಗಾವಿ,

ಕರ್ನಾಟಕ ಸರ್ಕಾರ
ಸಮಾಜ ಕಲ್ಯಾಣ ಇಲಾಖೆ
ಸಹಾಯಕ ನಿರ್ದೇಶಕರು (ಗ್ರೇಡ್-1) ರವರ ಕಛೇರಿ, ಸಮಾಜ ಕಲ್ಯಾಣ ಇಲಾಖೆ,
ಬೆಂಗಳೂರು ದಕ್ಷಿಣ ತಾಲ್ಲೂಕು.ಎಸ್ ಕರಿಯಪ್ಪ ಮುಖ್ಯರಸ್ತೆ, ಬನಶಂಕರಿ, ಬೆಂಗಳೂರು 560070
ದೂರವಾಣಿ ಸಂಖ್ಯೆ: 080-26711096 EmailId tswobloresouth@gmail.com

ಸನಿ/ಸಕಇ/ಬೆಂ(ದ)/ಮೆ.ನಂ.ವಿವೇ&ಇತರ/ಸಿ.ಆರ್- 31 /2023-24 ದಿನಾಂಕ :- 05-08-2024

<u>ರವರಿಗೆ</u>
ರಿಜಿಸ್ಟ್ರಾರ್/ ನಿರ್ದೇಶಕರು
1)ರಾಜೀವ್ ಗಾಂಧಿ ಯುನಿವರ್ಸಿಟಿ ಆಫ್ ಹೆಲ್ತ್ ಸೈನ್ಸ್
2) ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ
3) ಬೆಂಗಳೂರು ವಿಶ್ವವಿದ್ಯಾಲಯ, ಜ್ಞಾನಭಾರತಿ ಕ್ಯಾಂಪಸ್
4) ಬೆಂಗಳೂರು ಕೇಂದ್ರೀಯ ವಿಶ್ವವಿದ್ಯಾಲಯ
5) ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯ ಹುಬ್ಬಳ್ಳಿ
6) ಪಿ.ಇ.ಎಸ್ ವಿಶ್ವವಿದ್ಯಾಲಯ
7) ಆರ್.ವಿ.ವಿಶ್ವವಿದ್ಯಾಲಯ
8) ದಯಾನಂದ ಸಾಗರ್ ವಿಶ್ವವಿದ್ಯಾಲಯ
9) ಕ್ರೈಸ್ಟ್ ವಿಶ್ವವಿದ್ಯಾಲಯ
10) ಪದವಿ ಶಿಕ್ಷಣ ಇಲಾಖೆ.
11) ಕರ್ನಾಟಕ ಪದವಿ ಪೂರ್ವ ಶಿಕ್ಷಣ ಇಲಾಖೆ
12)ಕರ್ನಾಟಕ ನರ್ಸಿಂಗ್ ಕೌನ್ಸಿಲ್
13)ತಾಂತ್ರಿಕ ಶಿಕ್ಷಣ ಇಲಾಖೆ

50-04/05
09/08/24

ಮಾನ್ಯರೇ,

ವಿಷಯ:- ರಾಜ್ಯದ ವಿಶ್ವವಿದ್ಯಾಲಯಗಳಲ್ಲಿ/ಶಿಕ್ಷಣ ಸಂಸ್ಥೆಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಗೆ ಪ್ರವೇಶಾತಿ ಸಮಯದಲ್ಲಿ ಶುಲ್ಕಗಳನ್ನು ಪಡೆಯದಿರುವ ಬಗ್ಗೆ.

ಉಲ್ಲೇಖ:-
1. ಸರ್ಕಾರದ ಆದೇಶ ಸಂ:SWD/EDU/ED3/91/2023(com:1098854), ಬೆಂಗಳೂರು, ದಿನಾಂಕ:-03-07-2023
2. ಸರ್ಕಾರದ ಆದೇಶ ಸಂ:ಸಕಇ -ಎಸ್‌ಟಿಪಿ /108/2023, ದಿನಾಂಕ: 25-08-2023
3. ಈ ಕಛೇರಿಯ ಪತ್ರ ಸಮ ಸಂ: ಸನಿ:ಬೆಂ(ದ)ವಿವೇ:ಸಿಆರ್: 2023-24, ದಿನಾಂಕ:05-07-2023 & 30-09-2023, 21-05-2024 & 26-07-2024
4. ನಿರ್ದೇಶಕರು, ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಕೋಶ, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ರವರ ಪತ್ರ ಸಂ:SCSP/TSP ಕೋಶ/ಇ-1390209/2024-25, ದಿನಾಂಕ:30-04-2024.

5. ಜಂಟಿ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ನಗರ ಜಿಲ್ಲೆ ರವರ ಪತ್ರ ಸಂ:ಜಂನಿಸಕಇ/ಬೆಂ(ನ)/ಯೋ/ ಸಿಆರ್-14/2023-24, ದಿನಾಂಕ:-06-05-2024.

**********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ (1) ಮತ್ತು (2) ರ ಸರ್ಕಾರಿ ಆದೇಶಗಳಲ್ಲಿ 2023-24 ನೇ ಸಾಲಿನಿಂದ ಜಾರಿಗೆ ಬರುವಂತೆ ಕುಟುಂಬದ ವಾರ್ಷಿಕ ಆದಾಯ **ರೂ.2.50 ಲಕ್ಷ ಒಳಗಿರುವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನಕ್ಕೆ ಅರ್ಹತೆ ಪಡೆದಿರುವ ಪರಿಶಿಷ್ಟ ಜಾತಿ /ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಗೆ ಸಂಬಂಧಿಸಿದಂತೆ ಈ ಕೆಳಕಂಡ ಕ್ರಮ ವಹಿಸಲು ಆದೇಶಿಸಲಾಗಿರುತ್ತದೆ.**

1. ದಾಖಲಾತಿ ಸಮಯದಲ್ಲಿ ಯಾವುದೇ ಕಡ್ಡಾಯ ಶುಲ್ಕಗಳನ್ನು (ಮರುಪಾವತಿ ಮಾಡಲಾಗುವ Deposit ಗಳನ್ನು ಹೊರತುಪಡಿಸಿ) ಪಾವತಿ ಮಾಡುವಂತೆ ಒತ್ತಾಯಿಸದೇ ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ ಕಲ್ಪಿಸುವುದು.
2 ಸಮಾಜ ಕಲ್ಯಾಣ ಇಲಾಖೆಯು DBT ಮೂಲಕ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಮೊತ್ತವನ್ನು ಪಾವತಿಸಿದ ನಂತರ ಮಾಹಿತಿಯನ್ನು ಖಚಿತ ಪಡಿಸಿಕೊಂಡು ವಿದ್ಯಾರ್ಥಿಯಿಂದ ಸದರಿ ಮೊತ್ತವನ್ನು ಪಾವತಿ ಮಾಡಿಕೊಳ್ಳುವುದು.
3 ಕೋರ್ಸುವಾರು ನಿಗದಿಯಾಗಿರುವ ಶುಲ್ಕದ ವಿವರವನ್ನು ಸಂಬಂಧಪಟ್ಟ ಇಲಾಖೆ/ವಿಶ್ವವಿದ್ಯಾಲಯ/ಮಂಡಳಿಗಳು ನೇರವಾಗಿ ರಾಜ್ಯ ವಿದ್ಯಾರ್ಥಿವೇತನ ಪೋರ್ಟಲ್‌ನಲ್ಲಿ ನಮೂದು ಮಾಡಲಾಗುತ್ತಿದ್ದು, ಅದರಂತೆ ಶುಲ್ಕಗಳನ್ನು ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮದಡಿ ಮಂಜೂರು ಮಾಡಲಾಗುತ್ತಿರುತ್ತದೆ.
4 ಕೌನ್ಸಿಲಿಂಗ್ ಸೀಟುಗಳಿಗೆ ಸಂಬಂಧಿಸಿದಂತೆ ಸರ್ಕಾರಿ ಕೋಟಾ ಸೀಟುಗಳಿಗೆ ವಿಶ್ವವಿದ್ಯಾಲಯ ಹಾಗೂ KEA ನಿಗದಿಪಡಿಸಿದ ಶುಲ್ಕಗಳನ್ನು ವಿದ್ಯಾರ್ಥಿವೇತನ ಕಾರ್ಯಕ್ರಮದಡಿ ಮಂಜೂರು ಮಾಡಲು ಕ್ರಮವಹಿಸಲಾಗಿದ್ದು, ಸರ್ಕಾರಿ ಕೋಟಾ ಸೀಟಿನಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳಿಂದ ಇತರೆ ಯಾವುದೇ ಶುಲ್ಕಗಳನ್ನು ವಸೂಲು ಮಾಡುವಂತಿಲ್ಲ.
5 ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮದಡಿ ನಿಖರವಾದ Fee Components ಗಳನ್ನು ನಿಗದಿತ ಅವಧಿಯೊಳಗೆ ಇಲಾಖೆ/ವಿಶ್ವವಿದ್ಯಾಲಯ/ಮಂಡಳಿಗಳು ರಾಜ್ಯ ವಿದ್ಯಾರ್ಥಿವೇತನ ಪೋರ್ಟಲ್‌ನಲ್ಲಿ ನಮೂದು ಮಾಡುವುದು.ಒಂದು ವೇಳೆ ಶುಲ್ಕಗಳು ಕಡಿಮೆ ಮಂಜೂರಾದಲ್ಲಿ ಸಂಬಂಧಪಟ್ಟ ಇಲಾಖೆ/ವಿಶ್ವವಿದ್ಯಾಲಯ/ಮಂಡಳಿಗಳೇ ನೇರ ಹೊಣೆಗಾರರಾಗಿರುತ್ತಾರೆ.
6 ವಿದ್ಯಾರ್ಥಿಯು ಆಯಾ ಕೋರ್ಸಿಗೆ ದಾಖಲಾದ ದಿನದಿಂದಲೇ ವಿದ್ಯಾರ್ಥಿಗೆ University Registration Number ನ್ನು ನೀಡುವುದು ಹಾಗೂ ದಾಖಲಾದ ದಿನದಿಂದಲೇ ವಿದ್ಯಾರ್ಥಿಯು ವಿದ್ಯಾರ್ಥಿವೇತನಕ್ಕೆ ಅರ್ಜಿಸಲ್ಲಿಸಲು ಅವಕಾಶ ಮಾಡಿಕೊಡುವುದು.
7 ವಿದ್ಯಾರ್ಥಿವೇತನಕ್ಕೆ ಅರ್ಹತೆ ಪಡೆದಿರುವ ವಿದ್ಯಾರ್ಥಿಯಿಂದ ಯಾವುದೇ ಕಡ್ಡಾಯ ಶುಲ್ಕ ಪಡೆಯದೇ UUCMS ಸಂಖ್ಯೆಯನ್ನು ವಿದ್ಯಾರ್ಥಿಗೆ ವಿತರಿಸುವುದು. ತಾಂತ್ರಿಕ ಶಿಕ್ಷಣ ಸಂಸ್ಥೆಗಳೂ ಸಹ ಇದರಂತೆಯೇ ಕ್ರಮವಹಿಸುವುದು.
8 ಭಾರತ ಸರ್ಕಾರ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಮಾರ್ಗಸೂಚಿಯಲ್ಲಿ ಉಲ್ಲೇಖಿಸಿರುವಂತೆ Freeship Card ನ್ನು ಕಡ್ಡಾಯವಾಗಿ ಮಾನ್ಯ ಮಾಡುವುದು ಎಲ್ಲಾ ಕಾಲೇಜುಗಳ ಜವಾಬ್ದಾರಿಯಾಗಿರುತ್ತದೆ. Freeship Card ನಲ್ಲಿ ವಿದ್ಯಾರ್ಥಿಯು ಸಲ್ಲಿಸಿರುವ ದೃಢೀಕರಣದಂತೆ ವಿದ್ಯಾರ್ಥಿಗೆ ವಿದ್ಯಾರ್ಥಿವೇತನ ಮೊತ್ತ ಪಾವತಿಯಾದ

ನಂತರದಲ್ಲಿ ವಿದ್ಯಾರ್ಥಿಯಿಂದ ಕಡ್ಡಾಯವಾಗಿ ಭರಿಸಿಕೊಳ್ಳುವುದು. ಒಂದು ವೇಳೆ ವಿದ್ಯಾರ್ಥಿಯು ತನ್ನ ಖಾತೆಗೆ ವಿದ್ಯಾರ್ಥಿವೇತನ ಜಮೆಯಾದ ನಂತರದಲ್ಲೂ ಕಾಲೇಜಿಗೆ ಶುಲ್ಕವನ್ನು ಮರುಪಾವತಿ ಮಾಡದೇ ಇದ್ದಲ್ಲಿ ಅಂತಹ ವಿದ್ಯಾರ್ಥಿಗೆ ವಿದ್ಯಾರ್ಥಿವೇತನ ಜಮೆ ಆಗಿರುವ ಬಗ್ಗೆ ದೃಢೀಕರಿಸಿಕೊಂಡು ವಿದ್ಯಾರ್ಥಿಯ ವಿರುದ್ಧ ಸಂಬಂಧಪಟ್ಟ ಕಾಲೇಜು ಸೂಕ್ತ ಕ್ರಮ ತೆಗೆದುಕೊಳ್ಳುವುದು.

ಈ ಸಂಬಂಧ ಉಲ್ಲೇಖ (3)) ರ ಈ ಕಛೇರಿಯ ಪತ್ರಗಳಲ್ಲಿ ಸರ್ಕಾರದ ಆದೇಶದಂತೆ ಸೂಕ್ತ ಕ್ರಮವಹಿಸಲು ಬೆಂಗಳೂರು ದಕ್ಷಿಣ ತಾಲ್ಲುಕು ವ್ಯಾಪ್ತಿಯಲ್ಲಿ ಬರುವ ಎಲ್ಲಾ ಕಾಲೇಜು ಪ್ರಾಂಶುಪಾಲರುಗಳಿಗೆ ಪತ್ರ ಬರೆದು ಸರ್ಕಾರದ ಆದೇಶದಂತೆ ಕ್ರಮ ವಹಿಸಲು ಕೋರಲಾಗಿರುತ್ತದೆ.. ಆದಾಗ್ಯೂ ಕೆಲವು ವಿದ್ಯಾಸಂಸ್ಥೆಯವರು ಪ್ರಸಕ್ತ ವರ್ಷದ ದಾಖಲಾತಿ **ಸಂದರ್ಭದಲ್ಲಿ ವಿದ್ಯಾರ್ಥಿಗಳಿಂದ ಒತ್ತಾಯಪೂರ್ವಕವಾಗಿ ಶುಲ್ಕಗಳನ್ನು ಪಾವತಿಸಿಕೊಳ್ಳುತ್ತಿರುವುದು ಈ ಕಛೇರಿಯ ಗಮನಕ್ಕೆ ಬಂದಿರುತ್ತದೆ.**

ಮುಂದುವರೆದು ಉಲ್ಲೇಖ (4) & (5) ಪತ್ರಗಳಲ್ಲಿ ನಿರ್ದೇಶಕರು, ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಕೋಶ, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ಹಾಗೂ ಜಂಟಿ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ನಗರ ಜಿಲ್ಲೆ ರವರು ಕ್ರಮವಾಗಿ ಬೆಂಗಳೂರು ದಕ್ಷಿಣ ತಾಲ್ಲೂಕು ವ್ಯಾಪ್ತಿಯಲ್ಲಿ ಬರುವ ಎಲ್ಲಾ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಂದ , ಪೋಷಕರಿಂದ 1ನೇ ಪಿ.ಯು.ಸಿ.ಯಿಂದ ಉನ್ನತ ಶಿಕ್ಷಣದವರೆಗೆ ದಾಖಲಾತಿ ಸಮಯದಲ್ಲಿ ಶುಲ್ಕಗಳನ್ನು ಪಾವತಿಸಿಕೊಳ್ಳದಂತೆ ಬೆಂಗಳೂರು ದಕ್ಷಿಣ ತಾಲ್ಲೂಕು ವ್ಯಾಪ್ತಿಯಲ್ಲಿ ಬರುವ ವಿದ್ಯಾಸಂಸ್ಥೆಯ ಮುಖ್ಯಸ್ಥರುಗಳಿಗೆ ಸೂಚಿಸಲು ತಿಳಿಸಿರುತ್ತಾರೆ.

ಈ ಹಿನ್ನೆಲೆಯಲ್ಲಿ ಬೆಂಗಳೂರು ದಕ್ಷಿಣ ತಾಲ್ಲೂಕು ವ್ಯಾಪ್ತಿಗೆ ಬರುವ ಹಾಗೂ ತಮ್ಮ ವಿಶ್ವವಿದ್ಯಾಲಯ/ಇಲಾಖೆ/ಮಂಡಳಿಗಳ ಸಂಯೋಜಿತ ವಿದ್ಯಾಸಂಸ್ಥೆಗಳಲ್ಲಿ ದಾಖಲಾತಿ ಸಂದರ್ಭದಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ, ಪೋಷಕರಿಗೆ ಶುಲ್ಕವನ್ನು ಪಾವತಿಸುವಂತೆ ಒತ್ತಾಯಿಸಬಾರದೆಂದು ಹಾಗೂ ಸದರಿ ವಿದ್ಯಾರ್ಥಿಗಳ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಲು ಕ್ರಮ ವಹಿಸಿ, ಇಲಾಖಾ ವತಿಯಿಂದ ವಿದ್ಯಾರ್ಥಿವೇತನ ಮಂಜೂರಾದ ನಂತರ ವಿದ್ಯಾರ್ಥಿಗಳಿಂದ ಶುಲ್ಕವನ್ನು ಪಾವತಿಸಿಕೊಳ್ಳುಲು ಕ್ರಮ ವಹಿಸಲು ವಿದ್ಯಾಸಂಸ್ಥೆಯ ಮುಖ್ಯಸ್ಥರುಗಳಿಗೆ ಸೂಕ್ತ ನಿರ್ದೇಶನ ನೀಡಬೇಕಾಗಿ ತಮ್ಮನ್ನು ಕೋರಲಾಗಿದೆ.

ತಮ್ಮ ವಿಶ್ವಾಸಿ,

ಸಹಾಯಕ ನಿರ್ದೇಶಕರು (ಗ್ರೇಡ್-1)
ಸಮಾಜ ಕಲ್ಯಾಣ ಇಲಾಖೆ
ಬೆಂಗಳೂರು ದಕ್ಷಿಣ ತಾಲ್ಲೂಕು

ಪ್ರತಿಯನ್ನು: ಜಂಟಿ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ನಗರ ಜಿಲ್ಲೆರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯದ ವಿಶ್ವವಿದ್ಯಾಲಯಗಳಲ್ಲಿ / ಶಿಕ್ಷಣ ಸಂಸ್ಥೆಗಳಲ್ಲಿ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಪ್ರವೇಶಾತಿ ಸಮಯದಲ್ಲಿ ಶುಲ್ಕಗಳನ್ನು ಪಡೆಯದಿರುವ ಬಗ್ಗೆ

ಓದಲಾಗಿದೆ:

1. ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 372 ಯುನ್‌ಇ 2012, ದಿನಾಂಕ: 14-09-2012
2. ಸರ್ಕಾರದ ಆದೇಶ ಸಂಖ್ಯೆ:ಸಕಇ 83 ಪಕವಿ 2013, ದಿನಾಂಕ: 27-06-2013.
3. ಸರ್ಕಾರದ ಸುತ್ತೋಲೆ ಸಂಖ್ಯೆ: ಸಕಇ 167 ಪಕವಿ 2020, ದಿನಾಂಕ:12-11-2020.
4. ಆಯುಕ್ತರ ಏಕ ಕಡತ ಪ್ರಸ್ತಾವನೆ ಸಂಖ್ಯೆ: SWD/EDU/ED3/91/2023 (Com: 1098854).

**ಪ್ರಸ್ತಾವನೆ:**

ಮೆಟ್ರಿಕ್ ನಂತರದ ವಿವಿಧ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಹಾಗೂ ಕುಟುಂಬದ ವಾರ್ಷಿಕ ಆದಾಯ ರೂ.2.50 ಲಕ್ಷ ಒಳಗಿರುವ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮದಡಿ ವಿದ್ಯಾರ್ಥಿವೇತನ ಮಂಜೂರು ಮಾಡಲಾಗುತ್ತಿದೆ. ಸರ್ಕಾರ ಆಯಾಯ ಕೋರ್ಸಿಗೆ ನಿಗದಿ ಮಾಡಿರುವ ಕಾಲೇಜು ಶುಲ್ಕವನ್ನು ಮಾರುಪಾವತಿ ಮಾಡಲಾಗುತ್ತಿದೆ ಹಾಗೂ ಸದರಿ ಮೊತ್ತವನ್ನು ವಿದ್ಯಾರ್ಥಿಯು ತನ್ನ ಖಾತೆಗೆ ಜಮೆಯಾದ ನಂತರದಲ್ಲಿ ಸಂಬಂಧಪಟ್ಟ ಕಾಲೇಜಿಗೆ ಪಾವತಿಸಲು ಸೂಚಿಸಲಾಗಿರುತ್ತದೆ.

ಈ ಹಿನ್ನೆಲೆಯಲ್ಲಿ, ರಾಜ್ಯದ ವಿವಿಧ ವಿಶ್ವವಿದ್ಯಾಲಯಗಳಲ್ಲಿ, ಪರಿಶಿಷ್ಟ ಜಾತಿ ವಿದ್ಯಾರ್ಥಿಗಳು ಸ್ನಾತಕ/ಸ್ನಾತಕೋತ್ತರ/ಡಿಪ್ಲಮೋ/ಪಾಲಿಟೆಕ್ನಿಕ್/ ವೃತ್ತಿಪರ ಕೋರ್ಸ್ - ವೈದ್ಯಕೀಯ, ಇಂಜನಿಯರಿಂಗ್, ಹಾಗೂ allied Courses ಗಳಿಗೆ ಪ್ರವೇಶ ಪಡೆಯುವ ಸಂದರ್ಭದಲ್ಲಿ ಯಾವುದೇ ಶುಲ್ಕವನ್ನು ಕಡ್ಡಾಯವಾಗಿ ಪ್ರವೇಶಾತಿ ಸಮಯದಲ್ಲಿ ಪಾವತಿ ಮಾಡುವಂತೆ ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರು/ ವಿಶ್ವವಿದ್ಯಾಲಯದ ಮುಖ್ಯಸ್ಥರು ಒತ್ತಾಯ ಮಾಡಬಾರದೆಂದು ಈಗಾಗಲೇ ಮೇಲೆ ಓದಲಾದ ಕ್ರಮಸಂಖ್ಯೆ : (1) ರಲ್ಲಿ ಉನ್ನತ ಶಿಕ್ಷಣ ಇಲಾಖೆಯ ಸುತ್ತೋಲೆ ಹಾಗೂ ಕ್ರಮಸಂಖ್ಯೆ:(2) ಮತ್ತು (3)ರಲ್ಲಿ ಸಮಾಜ ಕಲ್ಯಾಣ ಇಲಾಖೆಯ ಸುತ್ತೋಲೆ ಮತ್ತು ಆದೇಶಗಳನ್ನು ಹೊರಡಿಸಲಾಗಿದೆ.

ಮುಂದುವರೆದು ಭಾರತ ಸರ್ಕಾರದ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಮಾರ್ಗಸೂಚಿ (2020-21 ರಿಂದ 2025-26 ರ ವರೆಗೆ) ಯ ಕಂಡಿಕೆ 8 ರಲ್ಲಿ Freeship Card ಬಗ್ಗೆ ವಿವರವಾದ ಮಾರ್ಗಸೂಚಿಗಳನ್ನು ಹೊರಡಿಸಲಾಗಿರುತ್ತದೆ.

| | |
|---|---|
| 8.1 | All eligible students shall be entitled to take admission in the institutions without pre-payment of Tuition Fees and hostel fees as per the Scheme Guidelines. To enable this, a FREESHIP CARD will be issued by the State Government to the eligible students, as per the procedure.......... |

----2

ಅದರಂತೆ, SSP ತಂತ್ರಾಂಶದಲ್ಲಿ, ಸದರಿ FREESHIP CARD ಗೆ ಅವಕಾಶ ಮಾಡಿಕೊಡಲಾಗಿದೆ. ಹಾಗೂ ಅರ್ಹ ವಿದ್ಯಾರ್ಥಿಗಳು ಸದರಿ ಕಾರ್ಡಿನ ಮೂಲಕ ಯಾವುದೇ ಬೋಧನಾ ಶುಲ್ಕ ಹಾಗೂ ಕಡ್ಡಾಯ ಶುಲ್ಕಗಳನ್ನು ಪಾವತಿಸದೇ ಎಲ್ಲಾ ಶಿಕ್ಷಣ ಸಂಸ್ಥೆಗಳಲ್ಲಿ ಪ್ರವೇಶ ಪಡೆಯುತ್ತಿದ್ದಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4) ರಲ್ಲಿನ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರ ಪ್ರಸ್ತಾವನೆಯಂತೆ ಶುಲ್ಕ ಮರುಪಾವತಿಗೆ ಸಂಬಂಧಿಸಿದಂತೆ ಸಮಾಜ ಕಲ್ಯಾಣ ಇಲಾಖೆಗೆ ಈ ಕೆಳಕಂಡಂತೆ ದೂರುಗಳು ವಿದ್ಯಾರ್ಥಿಗಳಿಂದ ಸ್ವೀಕೃತವಾಗಿದ್ದು, ಇವನ್ನು ಪರಿಶೀಲಿಸಿದ ನಂತರ ಈ ಕೆಳಕಂಡ ಅಂಶಗಳು ಬೆಳಕಿಗೆ ಬಂದಿರುತ್ತದೆ.

1. ವಿದ್ಯಾರ್ಥಿಗಳಿಂದ ದಾಖಲಾತಿ ಸಮಯದಲ್ಲಿ ಶುಲ್ಕ ಪಾವತಿ ಮಾಡುವಂತೆ ಕಾಲೇಜುಗಳಲ್ಲಿ ಒತ್ತಾಯ ಮಾಡುತ್ತಿರುವುದು.

2. 2022-23 ನೇ ಸಾಲಿನಿಂದ UUCMS ಮುಖಾಂತರ ದಾಖಲಾತಿ ನಡೆಯುತ್ತಿದ್ದು, ವಿದ್ಯಾರ್ಥಿಯು ಶುಲ್ಕ ಪಾವತಿಸದ ಹೊರತು University register Number ಬರುವುದಿಲ್ಲ. University register Number ಬರದೇ ಇದ್ದರೆ, SSP ರವರು ವಿದ್ಯಾರ್ಥಿಗೆ ವಿದ್ಯಾರ್ಥಿ ವೇತನಕ್ಕೆ ಅರ್ಜಿಯನ್ನು ಹಾಕಲು ಅವಕಾಶ ಇರುವುದಿಲ್ಲ. ಇದರಿಂದ ವಿದ್ಯಾರ್ಥಿಗಳು ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನದಿಂದ ವಂಚಿತರಾಗುತ್ತಿದ್ದಾರೆ.

3. ವಿದ್ಯಾರ್ಥಿಗಳು ಸರ್ಕಾರಿ ಕೋಟಾ/SNQ ಕೋಟಾದಡಿ ಆಯ್ಕೆಯಾಗಿದ್ದರೂ ಸಹ, ಹೆಚ್ಚುವರಿ ಶುಲ್ಕಗಳನ್ನು ವಿದ್ಯಾರ್ಥಿಗಳಿಂದ ವಸೂಲು ಮಾಡುತ್ತಿರುವ ಬಗ್ಗೆ. (ಉದಾ: ಇಂಜಿನಿಯರಿಂಗ್ ಕೋರ್ಸಿಗೆ ಸಂಬಂಧಿಸಿದಂತೆ ವಿದ್ಯಾರ್ಥಿಯು SNQ ಕೋಟಾದಡಿ ಆಯ್ಕೆಯಾಗಿದ್ದರೂ ಸಹ, ಸುಮಾರು ರೂ.50,000 ಗಳಿಂದ 1.00 ಲಕ್ಷ ಶುಲ್ಕ ಪಾವತಿಸುವಂತೆ ಒತ್ತಾಯ ಮಾಡುತ್ತಿರುವುದು.

4. ವೃತ್ತಿಪರ ಕೋರ್ಸುಗಳ ಸಂಬಂಧ SSP ರವರು University Register Number ಅನ್ನು ಕಡ್ಡಾಯ ಮಾಡಿದ್ದು, ಇದರಿಂದಾಗಿ ವಿದ್ಯಾರ್ಥಿಗಳಿಗೆ ಸಕಾಲದಲ್ಲಿ ಅರ್ಜಿ ಸಲ್ಲಿಸಲು ಸಾಧ್ಯವಾಗದೇ ಇರುವುದರಿಂದಲೂ ಹಾಗೂ ಇದರಿಂದಾಗಿ ಸಕಾಲದಲ್ಲಿ ಸಂಸ್ಥೆಗೆ ಶುಲ್ಕ ಪಾವತಿ ಮಾಡಲು ಸಾಧ್ಯವಾಗದೇ ಇರುವುದರಿಂದ, ವೃತ್ತಿಪರ ಶಿಕ್ಷಣ ಸಂಸ್ಥೆಗಳು ಪ.ಜಾತಿ ವಿದ್ಯಾರ್ಥಿಗಳಿಗೆ ದಾಖಲಾದ ಕೂಡಲೇ ಅಗಾದ ಮೊತ್ತವನ್ನು ಶುಲ್ಕವನ್ನಾಗಿ ಪಾವತಿಸುವಂತೆ ಒತ್ತಾಯ ಮಾಡುತ್ತಿರುವುದು.

ಅಲ್ಲದೇ, ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ ರವರು ದಿನಾಂಕ: 23.06.2022 ರಂದು ಸಂಖ್ಯೆ: ಕಾಶಿಇ/ಶೈವಿ/06/ಪದಿ ಶುಲ್ಕ/2022-23 ರೀತ್ಯಾ ಹೊರಡಿಸಿರುವ ಸುತ್ತೋಲೆಯ ಷರತ್ತುಗಳ ಕ್ರಮ ಸಂಖ್ಯೆ: 7 ರಲ್ಲಿ ಈ ಕೆಳಗಿನಂತೆ ಷರತ್ತನ್ನು ವಿಧಿಸಿರುವುದರಿಂದ ವಿದ್ಯಾರ್ಥಿವೇತನಕ್ಕೆ ಅರ್ಹತೆ ಪಡೆದಿರುವ ಪ.ಜಾತಿ ವಿದ್ಯಾರ್ಥಿಗಳು ಇದರಿಂದ ತೀವ್ರ ಸಂಕಷ್ಟಕ್ಕೆ ಸಿಲುಕಿದಂತಾಗಿದೆ.

| | |
|---|---|
| 7 | ವಿವಿಧ ಇಲಾಖೆಗಳಿಂದ ವಿದ್ಯಾರ್ಥಿಗಳಿಗೆ ಮಂಜೂರು ಮಾಡಲಾಗುವ ವಿದ್ಯಾರ್ಥಿವೇತನ ಮೊತ್ತದಲ್ಲಿ ವಿನಾಯಿತಿ ನೀಡಿರುವ ಶುಲ್ಕಗಳನ್ನು ಕಡ್ಡಾಯವಾಗಿ ಪಾವತಿಸಿಕೊಂಡು ಉಳಿಕೆ ಮೊತ್ತವನ್ನು ವಿದ್ಯಾರ್ಥಿಗಳಿಗೆ ಹಿಂಪಾವತಿಸಲು ಸೂಚಿಸಲಾಗಿದೆ. |

ಈ ಎಲ್ಲಾ ಅಂಶಗಳ ಹಿನ್ನೆಲೆಯಲ್ಲಿ, 2023-24 ನೇ ಸಾಲಿನಿಂದ ಜಾರಿಗೆ ಬರುವಂತೆ ಕುಟುಂಬದ ವಾರ್ಷಿಕ ಆದಾಯ ರೂ.2.50 ಲಕ್ಷ ಒಳಗಿರುವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನಕ್ಕೆ ಅರ್ಹತೆ ಪಡೆದಿರುವ ಪರಿಶಿಷ್ಟ ಜಾತಿ ವಿದ್ಯಾರ್ಥಿಯಿಂದ ದಾಖಲಾತಿ ಸಮಯದಲ್ಲಿ ಯಾವುದೇ ಕಡ್ಡಾಯ ಶುಲ್ಕಗಳನ್ನು (ಮರುಪಾವತಿ ಮಾಡಲಾಗುವ/Deposit ಗಳನ್ನು ಹೊರತುಪಡಿಸಿ) ಪಾವತಿ ಮಾಡಿಸಿಕೊಳ್ಳದೇ ಉಚಿತವಾಗಿ ಪ್ರವೇಶ ಕಲ್ಪಿಸುವ ನಿಟ್ಟಿನಲ್ಲಿ ಉನ್ನತ ಶಿಕ್ಷಣ ಇಲಾಖೆ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಸಹಮತಿಯ ಮೇರೆಗೆ ಈ ಕೆಳಗಿನಂತೆ ಸರ್ಕಾರವು ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:SWD/EDU/ED3/91/2023 (Com: 1098854), ಬೆಂಗಳೂರು, ದಿನಾಂಕ: 03-07-2023**

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಉನ್ನತ ಶಿಕ್ಷಣ ಇಲಾಖೆ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಸಹಮತಿಯ ಮೇರೆಗೆ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನಕ್ಕೆ ಸಂಬಂಧಿಸಿದಂತೆ ಶಿಕ್ಷಣ ಸಂಸ್ಥೆ/ಕಾಲೇಜುಗಳು ಈ ಅಂಶಗಳನ್ನು ಕಡ್ಡಾಯವಾಗಿ ಪಾಲಿಸುವಂತೆ ಆದೇಶಿಸಿದೆ.

1. ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮದಡಿ ಮಂಜೂರಾಗುವ ಶುಲ್ಕದ ಮೊತ್ತವನ್ನು ವಿದ್ಯಾರ್ಥಿಯು ಕಡ್ಡಾಯವಾಗಿ ಕಾಲೇಜಿಗೆ ಪಾವತಿ ಮಾಡಬೇಕಾಗಿರುತ್ತದೆ (ನಿರ್ವಹಣಾ ವೆಚ್ಚ ಹೊರತುಪಡಿಸಿ). ಸಮಾಜ ಕಲ್ಯಾಣ ಇಲಾಖೆಯು DBT ಮೂಲಕ ವಿದ್ಯಾರ್ಥಿಗಳಿಗೆ ಪಾವತಿಸಿದ ವಿದ್ಯಾರ್ಥಿ ವೇತನದ ಬಗ್ಗೆ ಮಾಹಿತಿಯನ್ನು ಖಚಿತ ಪಡಿಸಿಕೊಂಡು ನಂತರ ವಿದ್ಯಾರ್ಥಿಯಿಂದ ಸದರಿ ಮೊತ್ತವನ್ನು ಪಾವತಿ ಮಾಡಿಸಿಕೊಳ್ಳುವುದು.

2. ಪರಿಶಿಷ್ಟ ಜಾತಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿ ಹಾಗೂ ಉನ್ನತ ಶಿಕ್ಷಣದಲ್ಲಿ ವಂಚಿತರಾಗಬಾರದೆಂಬ ಉದ್ದೇಶದಿಂದ ಪ್ರವೇಶಾತಿ ಸಮಯದಲ್ಲಿ ಕಡ್ಡಾಯ ಶುಲ್ಕಗಳನ್ನು (ಮರುಪಾವತಿ ಮಾಡಲಾಗುವ/Deposit ಗಳನ್ನು ಹೊರತುಪಡಿಸಿ) ಪಾವತಿಸುವಂತೆ ಒತ್ತಾಯ ಮಾಡುವಂತಿಲ್ಲ.

3. ಕೋರ್ಸುವಾರು ನಿಗದಿಯಾಗಿರುವ ಶುಲ್ಕದ ವಿವರಗಳನ್ನು ಸಂಬಂಧಪಟ್ಟ ಇಲಾಖೆ/ವಿಶ್ವವಿದ್ಯಾಲಯ/ಮಂಡಳಿಗಳು ನೇರವಾಗಿ ರಾಜ್ಯ ವಿದ್ಯಾರ್ಥಿವೇತನ ಪೋರ್ಟಲ್ ತಂತ್ರಾಂಶದಲ್ಲಿ ನಮೂದು ಮಾಡಲಾಗುತ್ತಿದ್ದು, ಈ ಕೆಳಕಂಡ ಶುಲ್ಕಗಳನ್ನು ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮದಡಿ ಮಂಜೂರು ಮಾಡಲಾಗುತ್ತಿದೆ.

| Sl No | Fee Components |
|---|---|
| 1 | Application Fee |
| 2 | Lab Fee |
| 3 | Library Fee |
| 4 | Sports Fee |
| 5 | Study Room Fee |
| 6 | Tuition Fee |
| 7 | Transfer Certificate Fee |

----4

| | |
|---|---|
| 8 | Study Certificate Fee |
| 9 | Magazine Calendar Fee |
| 10 | Medical Examination Fee |
| 11 | Union Fee |
| 12 | ID Card Fee |
| 13 | Exam Fee |
| 14 | Lab Exam Fee |
| 15 | Registration Fee |
| 16 | Sports Development Fee |
| 17 | OMR Fee |
| 18 | Marks card Fee |
| 19 | Admission Fee |
| 20 | Student Welfare Fund |
| 21 | Teachers Benefit Fund |
| 22 | Bharat Scouts & Guides - Rover Ranger Fee |
| 23 | Indian Red Cross Organization Fee |
| 24 | NSS Fee |
| 25 | Development Fee (Only for Govt., Colleges) |

4. ಕೌನ್ಸಿಲಿಂಗ್ ಸೀಟುಗಳಿಗೆ ಸಂಬಂಧಿಸಿದಂತೆ, ಸರ್ಕಾರಿ ಕೋಟಾ ಸೀಟುಗಳಿಗೆ ವಿಶ್ವವಿದ್ಯಾಲಯ ಹಾಗೂ KEA ನಿಗದಿಪಡಿಸಿದ ಶುಲ್ಕಗಳನ್ನು ವಿದ್ಯಾರ್ಥಿವೇತನ ಕಾರ್ಯಕ್ರಮದಡಿ ಮಂಜೂರು ಮಾಡಲು ಕ್ರಮವಹಿಸಲಾಗಿದ್ದು, ಸರ್ಕಾರಿ ಕೋಟಾ ಸೀಟಿನಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳಿಂದ ಇತರೆ ಯಾವುದೇ ಶುಲ್ಕಗಳನ್ನು ವಸೂಲು ಮಾಡುವಂತಿಲ್ಲ.

5. ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮದಡಿ ಮೇಲ್ಕಂಡ Fee Components ಗಳನ್ನು ಮಾತ್ರ ಮಂಜೂರು ಮಾಡಲಾಗುತ್ತಿದ್ದು, ಇಲಾಖೆ/ ಮಂಡಳಿ/ ವಿಶ್ವವಿದ್ಯಾಲಯಗಳು ಕೋರ್ಸ್‌ವಾರು ನಿಗದಿಯಾದ ಶುಲ್ಕದ ವಿವರಗಳನ್ನು ಕಡ್ಡಾಯವಾಗಿ ನಿಗದಿತ ಅವಧಿಯೊಳಗೆ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದಲ್ಲಿ ನಮೂದಿಸುವುದು. ಒಮ್ಮೆ ಸಮಾಜ ಕಲ್ಯಾಣ ಇಲಾಖೆಯಿಂದ ಅನುಮೋದನೆಯಾದ ಶುಲ್ಕದ ವಿವರಗಳನ್ನು ಯಾವುದೇ ಹಂತದಲ್ಲಿಯೂ ಬದಲಾವಣೆ ಮಾಡಲು ಸಾಧ್ಯವಿರುವುದಿಲ್ಲ. ಆದ್ದರಿಂದ, ಸಂಬಂಧಪಟ್ಟ ಇಲಾಖೆ/ ಮಂಡಳಿ/ ವಿಶ್ವವಿದ್ಯಾಲಯಗಳು ಕಡ್ಡಾಯವಾಗಿ Fee Components ಪರಿಶೀಲಿಸಿ ನಮೂದು ಮಾಡುವುದು. ಒಂದು ವೇಳೆ ಶುಲ್ಕಗಳು ಕಡಿಮೆ ಮಂಜೂರಾದಲ್ಲಿ,ಸಂಬಂಧಪಟ್ಟ ಇಲಾಖೆ/ಮಂಡಳಿ/ವಿಶ್ವವಿದ್ಯಾಲಯಗಳೇ ನೇರ ಹೊಣೆಗಾರರಾಗಿರುತ್ತಾರೆ.

6. ವಿದ್ಯಾರ್ಥಿಯು ಆಯಾ ಕೋರ್ಸಿಗೆ ದಾಖಲಾದ ದಿನದಿಂದಲೇ ವಿದ್ಯಾರ್ಥಿಗೆ University Reg Number ಅನ್ನು ನೀಡುವುದು ಹಾಗೂ ದಾಖಲಾದ ದಿನದಿಂದಲೇ ವಿದ್ಯಾರ್ಥಿಯು ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಲು ಅವಕಾಶ ಮಾಡಿಕೊಡುವುದು.

-----5

7. ವಿದ್ಯಾರ್ಥಿವೇತನಕ್ಕೆ ಅರ್ಹತೆ ಪಡೆದಿರುವ ವಿದ್ಯಾರ್ಥಿಯಿಂದ ಯಾವುದೇ ಕಡ್ಡಾಯ ಶುಲ್ಕ ಪಡೆಯದೇ UUCMS ನಲ್ಲಿ ದಾಖಲು ಮಾಡಿಕೊಳ್ಳುವುದು ಹಾಗೂ ಅಂದೇ UUCMS ಸಂಖ್ಯೆಯನ್ನು ವಿದ್ಯಾರ್ಥಿಗೆ ವಿತರಿಸುವುದು. ತಾಂತ್ರಿಕ ಶಿಕ್ಷಣ ಸಂಸ್ಥೆಗಳೂ ಸಹ ಇದರಂತೆಯೇ ಕ್ರಮವಹಿಸುವುದು.

8. ಅದೇ ರೀತಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ದಾಖಲಾಗುತ್ತಿರುವ ವಿದ್ಯಾರ್ಥಿಗಳಿಗೂ ಸಹ ದಾಖಲಾದ ದಿನದಂದೇ ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಲು ಅವಕಾಶ ಮಾಡಿಕೊಡುವುದು.

9. ಇಲಾಖಾ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿಶ್ವವಿದ್ಯಾಲಯಗಳ ಸಂಬಂಧ (ಉದಾ: Karnataka Law University, etc) E Attestation ಮೂಲಕ ದಾಖಲಾತಿ ದಿನದಂದೇ ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಲು ಅವಕಾಶ ಮಾಡಿಕೊಡುವುದು.

10. ಭಾರತ ಸರ್ಕಾರದ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಮಾರ್ಗಸೂಚಿಯಲ್ಲಿ ಉಲ್ಲೇಖಿಸಿರುವಂತೆ, Freeship Card ಅನ್ನು ಕಡ್ಡಾಯವಾಗಿ ಮಾನ್ಯ ಮಾಡುವುದು ಎಲ್ಲ ಕಾಲೇಜುಗಳ ಜವಾಬ್ದಾರಿಯಾಗಿರುತ್ತದೆ. Freeship Card ನಲ್ಲಿ ವಿದ್ಯಾರ್ಥಿಯು ಸಲ್ಲಿಸಿರುವ ದೃಢೀಕರಣದಂತೆ ವಿದ್ಯಾರ್ಥಿಗೆ ವಿದ್ಯಾರ್ಥಿವೇತನ ಮೊತ್ತ ಪಾವತಿಯಾದ ನಂತರದಲ್ಲಿ ವಿದ್ಯಾರ್ಥಿಯಿಂದ ಕಡ್ಡಾಯವಾಗಿ ಭರಿಸಿಕೊಳ್ಳುವುದು. ಒಂದು ವೇಳೆ ವಿದ್ಯಾರ್ಥಿಯು ತನ್ನ ಖಾತೆಗೆ ವಿದ್ಯಾರ್ಥಿವೇತನ ಮೊತ್ತ ಜಮೆಯಾದ ನಂತರದಲ್ಲೂ ಕಾಲೇಜಿಗೆ ಶುಲ್ಕವನ್ನು ಮರುಪಾವತಿ ಮಾಡದೇ ಇದ್ದಲ್ಲಿ, ಅಂತಹ ವಿದ್ಯಾರ್ಥಿಗೆ ವಿದ್ಯಾರ್ಥಿವೇತನ ಜಮೆ ಆಗಿರುವ ಬಗ್ಗೆ ದೃಢೀಕರಿಸಿಕೊಂಡು ಅಂತಹ ವಿದ್ಯಾರ್ಥಿಯ ವಿರುದ್ಧ ಸಂಬಂಧಪಟ್ಟ ಕಾಲೇಜು ಸೂಕ್ತ ಕ್ರಮ ತೆಗೆದುಕೊಳ್ಳುವುದು.

11. SSP ತಂತ್ರಾಂಶವನ್ನು ನಿರ್ವಹಣೆ ಮಾಡುತ್ತಿರುವ ಪ್ರಾಜೆಕ್ಟ್ ನಿರ್ದೇಶಕರು, SSP ರವರೂ ಸದರಿ ಎಲ್ಲಾ ಮೆಟ್ರಿಕ್ ನಂತರದ ಕೋರ್ಸುಗಳ ಸಂಬಂಧ ಯಾವುದೇ ರೀತಿಯ Bonafide Data ಗೆ ನಿರೀಕ್ಷಿಸದೇ ಹಾಗೂ ವಿದ್ಯಾರ್ಥಿಗಳಿಗೆ University Register Number ಒತ್ತಾಯ ಮಾಡದೇ ಕಡ್ಡಾಯವಾಗಿ ವಿದ್ಯಾರ್ಥಿವೇತನಕ್ಕೆ ಅರ್ಜಿಯನ್ನು ದಾಖಲಾದ ದಿನದಂದೇ ಪಡೆದು, ಅದೇ ದಿನ ಅರ್ಜಿ ಸಲ್ಲಿಸಲು ವಿದ್ಯಾರ್ಥಿಗೆ ಅವಕಾಶ ಮಾಡಿಕೊಡುವುದು ಹಾಗೂ ವಿದ್ಯಾರ್ಥಿ ಅರ್ಜಿ ಸಲ್ಲಿಸಿದ ದಿನದಂದೇ ಸಂಬಂಧಪಟ್ಟ ಇಲಾಖೆಗೆ ವಿದ್ಯಾರ್ಥಿವೇತನ ಮಂಜೂರು ಮಾಡಲು ಅವಕಾಶ ಮಾಡಿಕೊಡುವುದು. ಯಾವುದೇ ವಿಳಂಬಕ್ಕೆ ಹಾಗೂ ತಾಂತ್ರಿಕ ದೋಷಗಳಿಗೆ ಆಸ್ಪದ ನೀಡುವಂತಿಲ್ಲ.

12. SSP ತಾಂತ್ರಿಕ ದೋಷ ಹಾಗೂ University Reg No ಕೋರಿಕೆಯಿಂದಾಗಿ ವಿದ್ಯಾರ್ಥಿಗಳು ಸಕಾಲದಲ್ಲಿ ಅರ್ಜಿ ಸಲ್ಲಿಸಲು ತೊಂದರೆಯಾಗುತ್ತಿದೆ. SSP ರವರ ಈ ಕ್ರಮದಿಂದಾಗಿ, ವಿದ್ಯಾರ್ಥಿಗಳ ಶೈಕ್ಷಣಿಕ ಸಾಲಿನಲ್ಲಿಯೇ ಅವರ ವಿದ್ಯಾರ್ಥಿವೇತನ ದೊರೆಯುವುದು ಕಷ್ಟಸಾಧ್ಯವಾಗಿದೆ. ಈ ಹಿನ್ನೆಲೆಯಲ್ಲಿ, ಆಯಾಯ ಕಾಲೇಜುಗಳಿಗೆ E-Attestation ಮುಖಾಂತರ ವಿದ್ಯಾರ್ಥಿಗಳ ಪರಿಶೀಲನೆಗೆ ಕಡ್ಡಾಯವಾಗಿ ಅವಕಾಶ ಮಾಡಿಕೊಡುವುದು SSP ಜವಾಬ್ದಾರಿಯಾಗಿರುತ್ತದೆ. ಆದ್ದರಿಂದ, ಖಾಸಗಿ ಕಾಲೇಜುಗಳಲ್ಲಿ ದಾಖಲಾದ ದಿನದಂದೇ ಬೋಧನಾ ಶುಲ್ಕ ಪಾವತಿ ಮಾಡಲು ಒತ್ತಾಯ ಮಾಡಬಾರದು.

13. ದಾಖಲಾತಿ ಸಮಯದಲ್ಲಿ, ಮೆಟ್ರಿಕ್ ನಂತರದ ವಿದ್ಯಾರ್ಥಿವೇತನಕ್ಕೆ ಅರ್ಹತೆ ಪಡೆದಿರುವ ಪ.ಜಾತಿ ವಿದ್ಯಾರ್ಥಿಯಿಂದ ಯಾವುದೇ ಕಡ್ಡಾಯ ಶುಲ್ಕ ಪಾವತಿ ಮಾಡುವಂತೆ ಒತ್ತಾಯ ಮಾಡಬಾರದೆಂದು ಶಿಕ್ಷಣ ಸಂಸ್ಥೆಗಳಿಗೆ ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಶಿವಶಂಕರ್ ನಾಯಕ್.ಎಲ್)
ಸರ್ಕಾರದ ಉಪ ಕಾರ್ಯದರ್ಶಿ
ಸಮಾಜ ಕಲ್ಯಾಣ ಇಲಾಖೆ

**ಇವರಿಗೆ,**

1) ಮಹಾಲೇಖಪಾಲರು ಲೆಕ್ಕ ಪತ್ರ: ಲೆಕ್ಕಪರಿಶೋಧನೆ) ಪಾರ್ಕ್ ರಸ್ತೆ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ, (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಉನ್ನತ ಶಿಕ್ಷಣ, ತಾಂತ್ರಿಕ ಶಿಕ್ಷಣ) ಬಹುಮಹಡಿಗಳ ಕಟ್ಟಡ, ಬೆಂಗಳೂರು.
3) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ, ಉನ್ನತ ಶಿಕ್ಷಣ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ವೈದ್ಯಕೀಯ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
5) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಾನೂನು ಇಲಾಖೆ, ವಿಧಾನಸೌಧ, ಬೆಂಗಳೂರು.
6) ಸರ್ಕಾರದ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ (ಇ-ಆಡಳಿತ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
7) ಎಲ್ಲಾ ವಿಶ್ವವಿದ್ಯಾಲಯಗಳ ಕುಲಪತಿಗಳು(ಉನ್ನತ ಶಿಕ್ಷಣ ಇಲಾಖೆಯ ಮುಖಾಂತರ)
8) ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
9) ಆಯುಕ್ತರು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬೆಂಗಳೂರು.
10) ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
11) ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
12) ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇಲಾಖೆ, ಬೆಂಗಳೂರು.
13) ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಇ ಆಡಳಿತ ಕೇಂದ್ರ, ಸಿಆಸು ಇಲಾಖೆ(ಇ-ಆಡಳಿತ), ಬೆಂಗಳೂರು.
14) ಕಾರ್ಯಕ್ರಮ ನಿರ್ದೇಶಕರು, SSP, ಬೆಂಗಳೂರು.
15) ಎಲ್ಲಾ ಜಿಲ್ಲೆಗಳ ಜಂಟಿ/ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ(ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ಇವರ ಮುಖಾಂತರ)
16) ಎಲ್ಲಾ ಜಿಲ್ಲೆಗಳ ಉಪ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, (ಆಯುಕ್ತರು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬೆಂ. ಇವರ ಮುಖಾಂತರ)
17) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**ಪ್ರತಿ :**

1. ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಯವರು, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ.

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯದ ವಿಶ್ವವಿದ್ಯಾಲಯಗಳಲ್ಲಿ / ಶಿಕ್ಷಣ ಸಂಸ್ಥೆಗಳಲ್ಲಿ ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳಿಗೆ ಪ್ರವೇಶಾತಿ ಸಮಯದಲ್ಲಿ ಶುಲ್ಕಗಳನ್ನು ಪಡೆಯದಿರುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 372 ಯುನ್‌ಇ 2012, ದಿನಾಂಕ:14-09-2012
2. ಸರ್ಕಾರದ ಆದೇಶ ಸಂಖ್ಯೆ:ಸಕಇ 83 ಪಕವಿ 2013, ದಿನಾಂಕ:27-06-2013.
3. ಸರ್ಕಾರದ ಸುತ್ತೋಲೆ ಸಂಖ್ಯೆ: ಸಕಇ 167 ಪಕವಿ 2020, ದಿನಾಂಕ:12-11-2020.
4. ಸರ್ಕಾರದ ಆದೇಶ ಸಂಖ್ಯೆ:SWD/EDU/ED3/91/2023 (Com: 1098854), ದಿನಾಂಕ:03-07-2023.
5. ನಿರ್ದೇಶಕರು, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ ಇವರ ಏಕ ಕಡತ ಪ್ರಸ್ತಾವನೆ ಸಂಖ್ಯೆ:STWD-EDN 0EDN4/6/2023, (Com: 1123299).
6. ಉನ್ನತ ಶಿಕ್ಷಣ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಇಡಿ 253 ಟಿಇಸಿ 2023, ದಿನಾಂಕ:24.08.2023.

*****

ಮೆಟ್ರಿಕ್ ನಂತರದ ವಿವಿಧ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಹಾಗೂ ಕುಟುಂಬದ ವಾರ್ಷಿಕ ಆದಾಯ ರೂ.2.50 ಲಕ್ಷ ಒಳಗಿರುವ ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳಿಗೆ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮದಡಿ ವಿದ್ಯಾರ್ಥಿ ವೇತನ ಮಂಜೂರು ಮಾಡಲಾಗುತ್ತಿದೆ. ಸರ್ಕಾರ ಆಯಾಯ ಕೋರ್ಸಿಗೆ ನಿಗದಿಮಾಡಿರುವ ಕಾಲೇಜು ಶುಲ್ಕವನ್ನು ಮಾರುಪಾವತಿ ಮಾಡಲಾಗುತ್ತಿದೆ ಹಾಗೂ ಸದರಿ ಮೊತ್ತವನ್ನು ವಿದ್ಯಾರ್ಥಿಯು ತನ್ನ ಖಾತೆಗೆ ಜಮೆಯಾದ ನಂತರದಲ್ಲಿ ಸಂಬಂಧಪಟ್ಟ ಕಾಲೇಜಿಗೆ ಪಾವತಿಸಲು ಸೂಚಿಸಲಾಗಿರುತ್ತದೆ.

ಈ ಹಿನ್ನಲೆಯಲ್ಲಿ, ರಾಜ್ಯದ ವಿವಿಧ ವಿಶ್ವವಿದ್ಯಾಲಯಗಳಲ್ಲಿ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಸ್ನಾತಕ / ಸ್ನಾತಕೋತ್ತರ / ಡಿಪ್ಲೋಮೋ / ಪಾಲಿಟೆಕ್ನಿಕ್ / ವೃತ್ತಿಪರ ಕೋರ್ಸ್ – ವೈದ್ಯಕೀಯ, ಇಂಜನಿಯರಿಂಗ್, ಹಾಗೂ allied Courses ಗಳಿಗೆ ಪ್ರವೇಶ ಪಡೆಯುವ ಸಂದರ್ಭದಲ್ಲಿ ಯಾವುದೇ ಶುಲ್ಕವನ್ನು ಸ್ಥಳದಲ್ಲಿಯೇ ಪಾವತಿ ಮಾಡುವಂತೆ ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರು / ವಿಶ್ವವಿದ್ಯಾಲಯದ ಮುಖ್ಯಸ್ಥರು ಒತ್ತಾಯ ಮಾಡಬಾರದೆಂದು ಈಗಾಗಲೇ ಮೇಲೆ ಕ್ರಮಾಂಕ (1)ರಲ್ಲಿ ಓದಲಾದ ಉನ್ನತ ಶಿಕ್ಷಣ ಇಲಾಖೆಯ ಸುತ್ತೋಲೆ ಹಾಗೂ ಕ್ರಮಾಂಕ (2) ಮತ್ತು (3)

ರಲ್ಲಿ ಓದಲಾದ ಸಮಾಜ ಕಲ್ಯಾಣ ಇಲಾಖೆಯ ಸುತ್ತೋಲೆ ಮತ್ತು ಆದೇಶಗಳನ್ನು ಹೊರಡಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4) ರ ಆದೇಶ ಸಂಖ್ಯೆ: SWD/EDU/ED3/91/ 2023, (Com:1098854), ದಿನಾಂಕ:03-07-2023 ರಲ್ಲಿ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ದಾಖಲಾತಿ ಸಮಯದಲ್ಲಿ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನಕ್ಕೆ ಅರ್ಹತೆ ಪಡೆದಿರುವ ವಿದ್ಯಾರ್ಥಿಯಿಂದ ಯಾವುದೇ ಶುಲ್ಕ ಪಾವತಿ ಮಾಡುವಂತೆ ಒತ್ತಾಯ ಮಾಡಬಾರದೆಂದು ಆದೇಶ ಹೊರಡಿಸಲಾಗಿದೆ.

ಮುಂದುವರೆದು, ಭಾರತ ಸರ್ಕಾರದ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಮಾರ್ಗಸೂಚಿ (2020-21 ರಿಂದ 2025-26 ರ ವರೆಗೆ) ಯ ಕಂಡಿಕೆ 8 ರಲ್ಲಿ Freeship Card ಬಗ್ಗೆ ವಿವರವಾದ ಮಾರ್ಗಸೂಚಿಗಳನ್ನು ಹೊರಡಿಸಲಾಗಿರುತ್ತದೆ.

| | |
|---|---|
| 8.1 | All eligible students shall be entitled to take admission in the institutions without pre-payment of Tuition Fees and hostel fees as per the Scheme Guidelines. To enable this, a FREESHIP CARD will be issued by the State Government to the eligible students, as per the procedure........... |

ಅದರಂತೆ, SSP ತಂತ್ರಾಂಶದಲ್ಲಿ, ಸದರಿ FREESHIP CARD ಗೆ ಅವಕಾಶ ಮಾಡಿಕೊಡಲಾಗಿದೆ ಹಾಗೂ ಅರ್ಹ ವಿದ್ಯಾರ್ಥಿಗಳು ಸದರಿ ಕಾರ್ಡಿನ ಮೂಲಕ ಯಾವುದೇ ಬೋಧನಾ ಶುಲ್ಕ ಹಾಗೂ ಕಡ್ಡಾಯ ಶುಲ್ಕಗಳನ್ನು ಪಾವತಿಸದೇ ಎಲ್ಲಾ ಶಿಕ್ಷಣ ಸಂಸ್ಥೆಗಳಲ್ಲಿ ಪ್ರವೇಶ ಪಡೆಯಬಹುದಾಗಿದೆ.

ಶುಲ್ಕ ಮರುಪಾವತಿಗೆ ಸಂಬಂಧಿಸಿದಂತೆ, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಗೆ ಈ ಕೆಳಕಂಡಂತೆ ದೂರುಗಳು ವಿದ್ಯಾರ್ಥಿಗಳಿಂದ ಸ್ವೀಕೃತವಾಗಿರುವ ಕುರಿತು ಮೇಲೆ ಓದಲಾದ ಕ್ರಮ ಸಂಖ್ಯೆ:(5)ರ ನಿರ್ದೇಶಕರು, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ ಇವರು ಏಕ ಕಡತ ಪ್ರಸ್ತಾವನೆಯಲ್ಲಿ ಕೆಳಗಿನಂತೆ ವಿವರಿಸಿರುತ್ತಾರೆ.

1. ವಿದ್ಯಾರ್ಥಿಗಳಿಂದ ದಾಖಲಾತಿ ಸಮಯದಲ್ಲಿ ಶುಲ್ಕ ಪಾವತಿ ಮಾಡುವಂತೆ ಕಾಲೇಜುಗಳಲ್ಲಿ ಒತ್ತಾಯ ಮಾಡುತ್ತಿರುವುದು.

2. 2022-23ನೇ ಸಾಲಿನಿಂದ UUCMS ಮುಖಾಂತರ ದಾಖಲಾತಿ ನಡೆಯುತ್ತಿದ್ದು, ವಿದ್ಯಾರ್ಥಿಯು ಶುಲ್ಕ ಪಾವತಿಸದ ಹೊರತು University register Number ಬರುವುದಿಲ್ಲ. University register Number ಬರದೇ ಇದ್ದರೆ, SSP ರವರು ವಿದ್ಯಾರ್ಥಿಗೆ ವಿದ್ಯಾರ್ಥಿ ವೇತನಕ್ಕೆ ಅರ್ಜಿಯನ್ನು ಹಾಕಲು ಅವಕಾಶ ಇರುವುದಿಲ್ಲ. ಇದರಿಂದ ವಿದ್ಯಾರ್ಥಿಗಳು ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನದಿಂದ ವಂಚಿತರಾಗುತ್ತಿದ್ದಾರೆ.

3. ವಿದ್ಯಾರ್ಥಿಗಳು ಸರ್ಕಾರಿ ಕೋಟಾ/SNQ ಕೋಟಾದಡಿ ಆಯ್ಕೆಯಾಗಿದ್ದರೂ ಸಹ, ಹೆಚ್ಚುವರಿ ಶುಲ್ಕಗಳನ್ನು ವಿದ್ಯಾರ್ಥಿಗಳಿಂದ ವಸೂಲು ಮಾಡುತ್ತಿರುವ ಬಗ್ಗೆ. (ಉದಾ. ಇಂಜಿನಿಯರಿಂಗ್ ಕೋರ್ಸಿಗೆ ಸಂಬಂಧಿಸಿದಂತೆ ವಿದ್ಯಾರ್ಥಿಯು SNQ ಕೋಟಾದಡಿ ಆಯ್ಕೆಯಾಗಿದ್ದರೂ ಸಹ ಸುಮಾರು ರೂ.50,000 ಗಳಿಂದ 1.00 ಲಕ್ಷ ಶುಲ್ಕ ಪಾವತಿಸುವಂತೆ ಒತ್ತಾಯ ಮಾಡುತ್ತಿರುವುದು.

4. ವೃತ್ತಿಪರ ಕೋರ್ಸುಗಳ ಸಂಬಂಧ SSP ರವರು University Register Number ಅನ್ನು ಕಡ್ಡಾಯ ಮಾಡಿದ್ದು, ಇದರಿಂದಾಗಿ ವಿದ್ಯಾರ್ಥಿಗಳಿಗೆ ಸಕಾಲದಲ್ಲಿ ಅರ್ಜಿ ಸಲ್ಲಿಸಲು ಸಾಧ್ಯವಾಗದೇ ಇರುವುದರಿಂದಲೂ ಹಾಗೂ ಇದರಿಂದಾಗಿ ಸಕಾಲದಲ್ಲಿ ಸಂಸ್ಥೆಗೆ ಶುಲ್ಕ ಪಾವತಿ ಮಾಡಲು ಸಾಧ್ಯವಾಗದೇ ಇರುವುದರಿಂದ, ವೃತ್ತಿಪರ ಶಿಕ್ಷಣ ಸಂಸ್ಥೆಗಳು ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳಿಗೆ ದಾಖಲಾದ ಕೂಡಲೇ ಅಗಾಧ ಮೊತ್ತವನ್ನು ಶುಲ್ಕವನ್ನಾಗಿ ಪಾವತಿಸುವಂತೆ ಒತ್ತಾಯ ಮಾಡುತ್ತಿರುವುದು.

ಅಲ್ಲದೇ, ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆಯ ಸುತ್ತೋಲೆ ಸಂಖ್ಯೆ: ಕಾಶಿಇ/ಶೈವಿ/06/ಪದಿ ಶುಲ್ಕ/2022-23, ದಿನಾಂಕ:23.06.2022 ರ ಷರತ್ತುಗಳ ಕ್ರಮ ಸಂಖ್ಯೆ: 7 ರಲ್ಲಿ ಈ ಕೆಳಗಿನಂತೆ ಷರತ್ತನ್ನು ವಿಧಿಸಿರುವುದರಿಂದ ವಿದ್ಯಾರ್ಥಿ ವೇತನಕ್ಕೆ ಅರ್ಹತೆ ಪಡೆದಿರುವ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಇದರಿಂದ ತೀವ್ರ ಸಂಕಷ್ಟಕ್ಕೆ ಸಿಲುಕಿದಂತಾಗಿದೆ.

| | |
|---|---|
| 7 | ವಿವಿಧ ಇಲಾಖೆಗಳಿಂದ ವಿದ್ಯಾರ್ಥಿಗಳಿಗೆ ಮಂಜೂರು ಮಾಡಲಾಗುವ ವಿದ್ಯಾರ್ಥಿ ವೇತನ ಮೊತ್ತದಲ್ಲಿ ವಿನಾಯಿತಿ ನೀಡಿರುವ ಶುಲ್ಕಗಳನ್ನು ಕಡ್ಡಾಯವಾಗಿ ಪಾವತಿಸಿಕೊಂಡು ಉಳಿಕೆ ಮೊತ್ತವನ್ನು ವಿದ್ಯಾರ್ಥಿಗಳಿಗೆ ಹಿಂಪಾವತಿಸಲು ಸೂಚಿಸಲಾಗಿದೆ. |

ಈ ಎಲ್ಲಾ ಅಂಶಗಳ ಹಿನ್ನೆಲೆಯಲ್ಲಿ, 2023-24ನೇ ಸಾಲಿನಿಂದ ಜಾರಿಗೆ ಬರುವಂತೆ ಕುಟುಂಬದ ವಾರ್ಷಿಕ ಆದಾಯ ರೂ.2.50 ಲಕ್ಷ ಒಳಗಿರುವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನಕ್ಕೆ ಅರ್ಹತೆ ಪಡೆದಿರುವ ಪರಿಶಿಷ್ಟ ಪಂಗಡ ವಿದ್ಯಾರ್ಥಿಯಿಂದ ದಾಖಲಾತಿ ಸಮಯದಲ್ಲಿ ಯಾವುದೇ ಕಡ್ಡಾಯ ಶುಲ್ಕಗಳನ್ನು (ಮರುಪಾವತಿ ಮಾಡಲಾಗುವ /Deposit ಗಳನ್ನು ಹೊರತುಪಡಿಸಿ) ಪಾವತಿ ಮಾಡಿಸಿಕೊಳ್ಳದೇ ಉಚಿತವಾಗಿ ಪ್ರವೇಶ ಕಲ್ಪಿಸುವ ನಿಟ್ಟಿನಲ್ಲಿ ವಿದ್ಯಾರ್ಥಿಗಳಿಂದ ಯಾವುದೇ ಶುಲ್ಕ ಪಾವತಿ ಮಾಡುವಂತೆ ಒತ್ತಾಯ ಮಾಡಬಾರದೆಂದು ಆದೇಶ

ಹೊರಡಿಸುವಂತೆ ನಿರ್ದೇಶಕರು, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ ಇವರು ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (6) ರಲ್ಲಿ ಉನ್ನತ ಶಿಕ್ಷಣ ಇಲಾಖೆಯು ರಾಜ್ಯದ ವಿಶ್ವವಿದ್ಯಾಲಯ/ ಶಿಕ್ಷಣ ಸಂಸ್ಥೆಗಳಲ್ಲಿ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಪ್ರವೇಶಾತಿ ಸಮಯದಲ್ಲಿ ಶುಲ್ಕವನ್ನು ಪಡೆಯದಂತೆ ಸುತ್ತೋಲೆ ಹೊರಡಿಸಲು ಸಹಮತಿ ನೀಡಿರುತ್ತದೆ.

ಮೇಲಿನ ಪ್ರಸ್ತಾವನೆಯನ್ನು ಸರ್ಕಾರವು ಪರಿಶೀಲಿಸಿ, ಸಮಾಜ ಕಲ್ಯಾಣ ಇಲಾಖೆಯ ಮಾದರಿಯಲ್ಲಿ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ದಾಖಲಾತಿ ಸಮಯದಲ್ಲಿ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನಕ್ಕೆ ಅರ್ಹತೆ ಪಡೆದಿರುವ ವಿದ್ಯಾರ್ಥಿಯಿಂದ ಯಾವುದೇ ಶುಲ್ಕ ಪಾವತಿ ಮಾಡುವಂತೆ ಒತ್ತಾಯ ಮಾಡಬಾರದೆಂದು ಆದೇಶ ಹೊರಡಿಸಲು ನಿರ್ಧರಿಸಿ, ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಸಕಇ-ಎಸ್‌ಟಿಪಿ/108/2023,**
**ದಿನಾಂಕ:25-08-2023.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನಕ್ಕೆ ಸಂಬಂಧಿಸಿದಂತೆ ವಿದ್ಯಾಸಂಸ್ಥೆ/ ಕಾಲೇಜುಗಳು ಈ ಅಂಶಗಳನ್ನು ಕಡ್ಡಾಯವಾಗಿ ಪಾಲಿಸುವಂತೆ ಆದೇಶಿಸಿದೆ.

1. ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಕಾರ್ಯಕ್ರಮದಡಿ ಮಂಜೂರಾಗುವ ಶುಲ್ಕದ ಮೊತ್ತವನ್ನು ವಿದ್ಯಾರ್ಥಿಯು ಇತರೆ ಯಾವುದೇ ವಿಷಯಗಳಿಗೆ ಖರ್ಚು ಭರಿಸದೇ, ಕಡ್ಡಾಯವಾಗಿ ಕಾಲೇಜಿಗೆ ಪಾವತಿ ಮಾಡಬೇಕಾಗಿರುತ್ತದೆ (ನಿರ್ವಹಣಾ ವೆಚ್ಚ ಹೊರತುಪಡಿಸಿ). ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯು DBT ಮೂಲಕ ವಿದ್ಯಾರ್ಥಿ/ ವಿದ್ಯಾರ್ಥಿನಿಯರಿಗೆ ಪಾವತಿಸಿದ ಬಗ್ಗೆ ಮಾಹಿತಿಯನ್ನು ಖಚಿತ ಪಡಿಸಿಕೊಂಡು ನಂತರ ವಿದ್ಯಾರ್ಥಿ / ವಿದ್ಯಾರ್ಥಿನಿಯಿಂದ ಸದರಿ ಮೊತ್ತವನ್ನು ಪಾವತಿ ಮಾಡಿಸಿಕೊಳ್ಳುವುದು.
2. ಪರಿಶಿಷ್ಟ ಪಂಗಡದ ವಿದ್ಯಾರ್ಥಿ/ ವಿದ್ಯಾರ್ಥಿನಿಯರ ಶೈಕ್ಷಣಿಕ ಹಿತದೃಷ್ಟಿ ಹಾಗೂ ಉನ್ನತ ಶಿಕ್ಷಣದಲ್ಲಿ ವಂಚಿತರಾಗಬಾರದೆಂಬ ಉದ್ದೇಶದಿಂದ ಪ್ರವೇಶಾತಿ ಸಮಯದಲ್ಲಿ ಕಡ್ಡಾಯ ಶುಲ್ಕಗಳನ್ನು ಪಾವತಿಸುವಂತೆ ಒತ್ತಾಯ ಮಾಡುವಂತಿಲ್ಲ.
3. ಕೋರ್ಸುವಾರು ನಿಗದಿಯಾಗಿರುವ ಶುಲ್ಕದ ವಿವರಗಳನ್ನು ಸಂಬಂಧಪಟ್ಟ ಇಲಾಖೆ/ ವಿಶ್ವವಿದ್ಯಾಲಯ/ ಮಂಡಳಿಗಳು ನೇರವಾಗಿ ರಾಜ್ಯ ವಿದ್ಯಾರ್ಥಿ ವೇತನ ಪೋರ್ಟಲ್ ತಂತ್ರಾಂಶದಲ್ಲಿ ನಮೂದು ಮಾಡಲಾಗುತ್ತಿದ್ದು, ಈ ಕೆಳಕಂಡ ಶುಲ್ಕಗಳನ್ನು ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಕಾರ್ಯಕ್ರಮದಡಿ ಮಂಜೂರು ಮಾಡಲಾಗುತ್ತಿದೆ.

| Sl No | Fee Components |
|---|---|

| | |
|---|---|
| 1 | Application Fee |
| 2 | Lab Fee |
| 3 | Library Fee |
| 4 | Sports Fee |
| 5 | Study Room Fee |
| 6 | Tuition Fee |
| 7 | Transfer Certificate Fee |
| 8 | Study Certificate Fee |
| 9 | Magazine Calendar Fee |
| 10 | Medical Examination Fee |
| 11 | Union Fee |
| 12 | ID Card Fee |
| 13 | Exam Fee |
| 14 | Lab Exam Fee |
| 15 | Registration Fee |
| 16 | Sports Development Fee |
| 17 | OMR Fee |
| 18 | Marks card Fee |
| 19 | Admission Fee |
| 20 | Student Welfare Fund |
| 21 | Teachers Benefit Fund |
| 22 | Bharat Scouts Guides Rover Ranger Fee |
| 23 | Indian Red Cross Organization Fee |
| 24 | NSS Fee |
| 25 | Development Fee (Only for Govt Colleges) |

4. ಕೌನ್ಸಿಲಿಂಗ್ ಸೀಟುಗಳಿಗೆ ಸಂಬಂಧಿಸಿದಂತೆ, ಸರ್ಕಾರಿ ಕೋಟಾ ಸೀಟುಗಳಿಗೆ ವಿಶ್ವವಿದ್ಯಾಲಯ ಹಾಗೂ KEA ನಿಗದಿಪಡಿಸಿದ ಶುಲ್ಕಗಳನ್ನು ವಿದ್ಯಾರ್ಥಿ ವೇತನ ಕಾರ್ಯಕ್ರಮದಡಿ ಮಂಜೂರು ಮಾಡಲು ಕ್ರಮವಹಿಸಲಾಗಿದ್ದು, ಸರ್ಕಾರಿ ಕೋಟಾ ಸೀಟಿನಲ್ಲಿ ಆಯ್ಕೆಯಾದ ವಿದ್ಯಾರ್ಥಿ / ವಿದ್ಯಾರ್ಥಿನಿಯರಿಂದ ಇತರೆ ಯಾವುದೇ ಶುಲ್ಕಗಳನ್ನು ವಸೂಲು ಮಾಡುವಂತಿಲ್ಲ.
5. ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಕಾರ್ಯಕ್ರಮದಡಿ ಮೇಲ್ಕಂಡ **Fee Components ಗಳನ್ನು ಮಾತ್ರ ಮಂಜೂರು ಮಾಡಲಾಗುತ್ತಿದ್ದು,** ಇಲಾಖೆ/ ಮಂಡಳಿ /ವಿಶ್ವವಿದ್ಯಾಲಯಗಳು ಕೋರ್ಸುವಾರು ನಿಗದಿಯಾದ ಶುಲ್ಕದ ವಿವರಗಳನ್ನು ಕಡ್ಡಾಯವಾಗಿ ನಿಗದಿತ ಅವಧಿಯೊಳಗೆ ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶದಲ್ಲಿ ನಮೂದಿಸುವುದು. ಒಮ್ಮೆ ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಯಿಂದ ಅನುಮೋದನೆಯಾದ ಶುಲ್ಕದ ವಿವರಗಳನ್ನು ಯಾವುದೇ ಹಂತದಲ್ಲಿಯೂ ಬದಲಾವಣೆ ಮಾಡಲು ಸಾಧ್ಯವಿರುವುದಿಲ್ಲ. ಆದ್ದರಿಂದ, ಸಂಬಂಧಪಟ್ಟ ಇಲಾಖೆ/ಮಂಡಳಿ/ವಿಶ್ವವಿದ್ಯಾಲಯಗಳು ಕಡ್ಡಾಯವಾಗಿ **Fee Components** ಪರಿಶೀಲಿಸಿ ನಮೂದು ಮಾಡುವುದು. ಒಂದು ವೇಳೆ ಶುಲ್ಕಗಳು

ಕಡಿಮೆ ಮಂಜೂರಾದಲ್ಲಿ, ಸಂಬಂಧಪಟ್ಟ ಇಲಾಖೆ/ ಮಂಡಳಿ/ ವಿಶ್ವವಿದ್ಯಾಲಯಗಳೇ ನೇರ ಹೊಣೆಗಾರರನ್ನಾಗಿ ಮಾಡುವುದು.

6. ವಿದ್ಯಾರ್ಥಿ/ ವಿದ್ಯಾರ್ಥಿನಿಯು ಆಯಾಯ ಕೋರ್ಸಿಗೆ ದಾಖಲಾದ ದಿನದಂದೇ ವಿದ್ಯಾರ್ಥಿಗೆ University Reg Number ಅನ್ನು ನೀಡುವುದು ಹಾಗೂ ದಾಖಲಾದ ದಿನದಂದೇ ವಿದ್ಯಾರ್ಥಿ/ ವಿದ್ಯಾರ್ಥಿನಿಯು ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸಲು ಅವಕಾಶ ಮಾಡಿಕೊಡುವುದು.
7. ವಿದ್ಯಾರ್ಥಿ ವೇತನಕ್ಕೆ ಅರ್ಹತೆ ಪಡೆದಿರುವ ವಿದ್ಯಾರ್ಥಿ/ ವಿದ್ಯಾರ್ಥಿನಿಯರಿಂದ ಯಾವುದೇ ಕಡ್ಡಾಯ ಶುಲ್ಕ ಪಡೆಯದೇ UUCMS ನಲ್ಲಿ ದಾಖಲು ಮಾಡಿಕೊಳ್ಳುವುದು ಹಾಗೂ ಅಂದೇ UUCMS ಸಂಖ್ಯೆಯನ್ನು ವಿದ್ಯಾರ್ಥಿ / ವಿದ್ಯಾರ್ಥಿನಿಗೆ ವಿತರಿಸುವುದು.
8. ಅದೇ ರೀತಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ದಾಖಲಾಗುತ್ತಿರುವ ವಿದ್ಯಾರ್ಥಿ/ ವಿದ್ಯಾರ್ಥಿನಿಯರಿಗೂ ಸಹ ದಾಖಲಾದ ದಿನದಂದೇ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸಲು ಅವಕಾಶ ಮಾಡಿಕೊಡುವುದು.
9. ಇಲಾಖಾ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿಶ್ವವಿದ್ಯಾಲಯಗಳ ಸಂಬಂಧ (ಉದಾ. Karnataka Law University, etc) ಗಳ ಸಂಬಂಧ E Attestation ಮೂಲಕ ದಾಖಲಾತಿ ದಿನದಂದೇ ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಲು ಅವಕಾಶ ಮಾಡಿಕೊಡುವುದು.
10. ಭಾರತ ಸರ್ಕಾರದ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಮಾರ್ಗಸೂಚಿಯಲ್ಲಿ ಉಲ್ಲೇಖಿಸಿರುವಂತೆ, Freeship Card ಅನ್ನು ಮಾನ್ಯ ಮಾಡುವುದು ಎಲ್ಲಾ ಕಾಲೇಜುಗಳ ಜವಾಬ್ದಾರಿಯಾಗಿರುತ್ತದೆ. Freeship Card ನಲ್ಲಿ ವಿದ್ಯಾರ್ಥಿ/ ವಿದ್ಯಾರ್ಥಿನಿಯು ಸಲ್ಲಿಸಿರುವ ದೃಢೀಕರಣದಂತೆ ವಿದ್ಯಾರ್ಥಿ/ ವಿದ್ಯಾರ್ಥಿನಿಗೆ ವಿದ್ಯಾರ್ಥಿ ವೇತನ ಮೊತ್ತ ಪಾವತಿಯಾದ ನಂತರದಲ್ಲಿ ವಿದ್ಯಾರ್ಥಿಯಿಂದ ಕಡ್ಡಾಯವಾಗಿ ಭರಿಸಿಕೊಳ್ಳುವುದು. ಒಂದು ವೇಳೆ ವಿದ್ಯಾರ್ಥಿ / ವಿದ್ಯಾರ್ಥಿನಿಯು ತನ್ನ ಖಾತೆಗೆ ವಿದ್ಯಾರ್ಥಿ ವೇತನ ಮೊತ್ತ ಜಮೆಯಾದ ನಂತರದಲ್ಲೂ ಕಾಲೇಜಿಗೆ ಶುಲ್ಕವನ್ನು ಮರುಪಾವತಿ ಮಾಡದೇ ಇದ್ದಲ್ಲಿ, ಅಂತಹ ವಿದ್ಯಾರ್ಥಿ/ ವಿದ್ಯಾರ್ಥಿನಿಗೆ ವಿದ್ಯಾರ್ಥಿ ವೇತನ ಜಮೆ ಆಗಿರುವ ಬಗ್ಗೆ ದೃಢೀಕರಿಸಿಕೊಂಡು ಅಂತಹ ವಿದ್ಯಾರ್ಥಿ/ ವಿದ್ಯಾರ್ಥಿನಿಯ ವಿರುದ್ಧ ಸಂಬಂಧಪಟ್ಟ ಕಾಲೇಜು ಸೂಕ್ತ ಕ್ರಮ ತೆಗೆದುಕೊಳ್ಳುವುದು.
11. SSP ತಂತ್ರಾಂಶವನ್ನು ನಿರ್ವಹಣೆ ಮಾಡುತ್ತಿರುವ ಕಾರ್ಯಕ್ರಮ ನಿರ್ದೇಶಕರು, SSP ರವರೂ ಸದರಿ ಎಲ್ಲಾ ಮೆಟ್ರಿಕ್ ನಂತರದ ಕೋರ್ಸುಗಳ ಸಂಬಂಧ ಯಾವುದೇ ರೀತಿಯ Bonafide Data ಗೆ ನಿರೀಕ್ಷಿಸದೇ ಹಾಗೂ ವಿದ್ಯಾರ್ಥಿ/ ವಿದ್ಯಾರ್ಥಿನಿಯರುಗಳಿಗೆ University Register Number ಒತ್ತಾಯ ಮಾಡದೇ ಕಡ್ಡಾಯವಾಗಿ ವಿದ್ಯಾರ್ಥಿ ವೇತನಕ್ಕೆ ಅರ್ಜಿಯನ್ನು ದಾಖಲಾದ ದಿನದಂದೇ ಪಡೆದು, ಅದೇ ದಿನ ಅರ್ಜಿ ಸಲ್ಲಿಸಲು ವಿದ್ಯಾರ್ಥಿ/ ವಿದ್ಯಾರ್ಥಿನಿಗೆ ಅವಕಾಶ ಮಾಡಿಕೊಡುವುದು ಹಾಗೂ ವಿದ್ಯಾರ್ಥಿ/ ವಿದ್ಯಾರ್ಥಿನಿ ಅರ್ಜಿ ಸಲ್ಲಿಸಿದ ದಿನದಂದೇ ಸಂಬಂಧಪಟ್ಟ ಇಲಾಖೆಗೆ ವಿದ್ಯಾರ್ಥಿ ವೇತನ ಮಂಜೂರು ಮಾಡಲು ಅವಕಾಶ ಮಾಡಿಕೊಡುವುದು. ಯಾವುದೇ ವಿಳಂಬಕ್ಕೆ ಹಾಗೂ ತಾಂತ್ರಿಕ ದೋಷಗಳಿಗೆ ಆಸ್ಪದ ನೀಡುವಂತಿಲ್ಲ.
12. ಖಾಸಗಿ ಕಾಲೇಜುಗಳಲ್ಲಿ ದಾಖಲಾದ ದಿನದಂದೇ ಭೋದನಾ ಶುಲ್ಕ ಪಾವತಿ ಮಾಡಲು ಒತ್ತಾಯ ಮಾಡುತ್ತಿರುವ ಬಗ್ಗೆ ದೂರುಗಳು ಸಲ್ಲಿಕೆಯಾಗಿರುತ್ತದೆ.

ಅಲ್ಲದೇ, ವಿದ್ಯಾರ್ಥಿ ವೇತನ ಮೊತ್ತ ನೇರವಾಗಿ ವಿದ್ಯಾರ್ಥಿ / ವಿದ್ಯಾರ್ಥಿನಿಗೆ ಪಾವತಿಯಾಗುತ್ತಿರುವುದರಿಂದಲೂ ಹಾಗೂ ವೈದ್ಯಕೀಯ ಶಿಕ್ಷಣ ದುಬಾರಿಯಾಗಿರುವುದರಿಂದಲೂ ಕಾಲೇಜುಗಳು ಆರಂಭದಲ್ಲಿಯೇ ಶುಲ್ಕ ಪಾವತಿಸಲು ಒತ್ತಾಯ ಮಾಡುತ್ತಿರುತ್ತವೆ. ಮುಂದುವರೆದು, SSP ತಾಂತ್ರಿಕ ದೋಷ ಹಾಗೂ University Reg No ಕೋರಿಕೆಯಿಂದಾಗಿ ವಿದ್ಯಾರ್ಥಿ/ ವಿದ್ಯಾರ್ಥಿನಿಯರುಗಳು ಸಕಾಲದಲ್ಲಿ ಅರ್ಜಿ ಸಲ್ಲಿಸಲು ತೊಂದರೆಯಾಗುತ್ತಿದೆ. SSP ರವರ ಈ ಕ್ರಮದಿಂದಾಗಿ, ವಿದ್ಯಾರ್ಥಿಗಳ ಶೈಕ್ಷಣಿಕ ಸಾಲಿನಲ್ಲಿಯೇ ಅವರ ವಿದ್ಯಾರ್ಥಿ ವೇತನ ದೊರೆಯುವುದು ಕಷ್ಟಸಾಧ್ಯವಾಗಿದೆ. ಈ ಹಿನ್ನೆಲೆಯಲ್ಲಿ, ಆಯಾಯ ಕಾಲೇಜುಗಳಿಗೆ Attestation ಮುಖಾಂತರ ವಿದ್ಯಾರ್ಥಿಗಳ ಪರಿಶೀಲನೆಗೆ ಕಡ್ಡಾಯವಾಗಿ ಅವಕಾಶ ಮಾಡಿಕೊಡುವುದು SSP ಜವಾಬ್ದಾರಿಯಾಗಿರುತ್ತದೆ.

13. ಒಂದು ವೇಳೆ ಮೇಲ್ಕಂಡ ಮಾರ್ಗಸೂಚಿಗಳನ್ನು ಉಲ್ಲಂಘಿಸಿ, ದಾಖಲಾತಿ ಸಮಯದಲ್ಲಿ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನಕ್ಕೆ ಅರ್ಹತೆ ಪಡೆದಿರುವ ಪರಿಶಿಷ್ಟ ಪಂಗಡದ ವಿದ್ಯಾರ್ಥಿ/ ವಿದ್ಯಾರ್ಥಿನಿಯಿಂದ ಕಡ್ಡಾಯವಾಗಿ ಶುಲ್ಕ ಪಾವತಿ ಮಾಡುವಂತೆ ಒತ್ತಾಯ ಮಾಡಬಾರದೆಂದು ವಿದ್ಯಾಸಂಸ್ಥೆಗಳಿಗೆ ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಶಿವಲಿಂಗಪ್ರಭು ವಾಲಿ)
ಸರ್ಕಾರದ ಉಪ ಕಾರ್ಯದರ್ಶಿ-2 (ಪ್ರ),
ಸಮಾಜ ಕಲ್ಯಾಣ ಇಲಾಖೆ.

ಇವರಿಗೆ :-

1) ಮಹಾಲೇಖಪಾಲರು, (ಲೆಕ್ಕ ಪತ್ರ: ಲೆಕ್ಕಪರಿಶೋಧನೆ), ಪಾರ್ಕ್ ರಸ್ತೆ, ಬೆಂಗಳೂರು.
2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ, ತಾಂತ್ರಿಕ ಶಿಕ್ಷಣ) ಬಹುಮಹಡಿಗಳ ಕಟ್ಟಡ, ಬೆಂಗಳೂರು.
3) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
4) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಾನೂನು ಇಲಾಖೆ, ವಿಧಾನಸೌಧ, ಬೆಂಗಳೂರು.
5) ಸರ್ಕಾರದ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ (ಇ-ಆಡಳಿತ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
6) ಎಲ್ಲಾ ವಿಶ್ವವಿದ್ಯಾಲಯಗಳ ಕುಲಪತಿಗಳು (ಉನ್ನತ ಶಿಕ್ಷಣ ಇಲಾಖೆಯ ಮುಖಾಂತರ)
7) ನಿರ್ದೇಶಕರು, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ, ಬೆಂಗಳೂರು.
8) ಆಯುಕ್ತರು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬೆಂಗಳೂರು.
9) ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
10) ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.

11)ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇಲಾಖೆ, ಬೆಂಗಳೂರು.

12) ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಇ ಆಡಳಿತ ಕೇಂದ್ರ, ಸಿಆಸು ಇಲಾಖೆ, (ಇ-ಆಡಳಿತ), ಬೆಂಗಳೂರು.

13)ಕಾರ್ಯಕ್ರಮ ನಿರ್ದೇಶಕರು, SSP, ಬೆಂಗಳೂರು.

14)ಎಲ್ಲಾ ಜಿಲ್ಲೆಗಳ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ/ ಯೋಜನಾ ಸಮನ್ವಯಾಧಿಕಾರಿ, ಸಮಗ್ರ ಗಿರಿಜನ ಅಭಿವೃದ್ಧಿ ಯೋಜನೆ, ಪರಿಶಿಷ್ಟ ಪಂಗಡಗಳ ಇಲಾಖೆ (ನಿರ್ದೇಶಕರು, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ, ಬೆಂಗಳೂರು ಇವರ ಮುಖಾಂತರ)

15)ಎಲ್ಲಾ ಜಿಲ್ಲೆಗಳ ಉಪ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, (ಆಯುಕ್ತರು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬೆಂಗಳೂರು ಇವರ ಮುಖಾಂತರ)

16)ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**ಪ್ರತಿ :**

1. ಮಾನ್ಯ ಪರಿಶಿಷ್ಟ ಪಂಗಡಗಳ ಕಲ್ಯಾಣ, ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರ ಆಪ್ತ ಕಾರ್ಯದರ್ಶಿಯವರು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸ ಸೌಧ.
3. ಸರ್ಕಾರದ ಉಪ ಕಾರ್ಯದರ್ಶಿ-1 ರವರ ಆಪ್ತ ಸಹಾಯಕರು, ಸಮಾಜ ಕಲ್ಯಾಣ ಇಲಾಖೆ.

****